# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 221 |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತ್‌ಗಳಿಗೆ ಚುನಾವಣೆಗಳು ನಡೆದರು ಅಧ್ಯಕ್ಷರು, ಉಪಾಧ್ಯಕ್ಷರುಗಳ ಚುನಾವಣೆ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು) | ಅಧ್ಯಕ್ಷ/ ಉಪಾಧ್ಯಕ್ಷರ ಮೀಸಲಾತಿ ನಿಗದಿಪಡಿಸುವುದಕ್ಕೆ (ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ನೇಮಕವಾಗದಿರುವ ಸ್ಥಳೀಯ ಸಂಸ್ಥೆಗಳನ್ನು ಒಳೊಂಡಂತೆ) ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ:<br><br>1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021 ರ ಪ್ರಕರಣದಲ್ಲಿ ದಿನಾಂಕ: 15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ\|\| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿತ್ತು. ಆಯೋಗವು ಇದುವರೆಗೆ ಅನುಸರಿಸಿರುವ ಮೀಸಲಾತಿಯನ್ನು ಮುಂದುವರೆಸುವಂತೆ ವರದಿಯನ್ನು ನೀಡಿರುತ್ತದೆ. ಸದರಿ ವರದಿಯ ಕುರಿತು ದಿನಾಂಕ:05.10.2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಯಲ್ಲಿ ನಿರ್ವಹಿಸುವಂತೆ/ ಹಸ್ತಾಂತರಿಸುವಂತೆ ಅನುಮೋದನೆ ನೀಡಲಾಗಿರುತ್ತದೆ ಹಾಗೂ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಕುರಿತು ಪರಿಶೀಲಿಸಲಾಗಿರುತ್ತದೆ.<br><br>ಈ ಮಧ್ಯೆ ಮಾನ್ಯ ಮುಖ್ಯಮಂತ್ರಿಯವರು "ಈಗಿರುವ ಆಡಳಿತಾತ್ಮಕ ವ್ಯವಸ್ಥೆಯನ್ನು ಮುಂದುವರೆಸಲು ಸಚಿವ ಸಂಪುಟದ ಮುಂದೆ |
| (ಆ) | ರಾಜ್ಯದಲ್ಲಿ ಎಷ್ಟು ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು, ಉಪಾಧ್ಯಕ್ಷರನ್ನು ನೇಮಕ ಮಾಡದೇ ಇರುವುದರ ಬಗ್ಗೆ ಸರ್ಕಾರದ ನಿಲುವೇನು; | |
| (ಇ) | ದಕ್ಷಿಣ ಕನ್ನಡ ಜಿಲ್ಲೆಯ ಬಜ್ಪೆ, ಕಿನ್ನಿಗೋಳಿ ನಗರ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸಿದ್ದು, ಚುನಾವಣೆ ನಡೆಸದಿರಲು ಕಾರಣಗಳೇನು; (ವಿವರ ನೀಡುವುದು) | |

| | | |
|---|---|---|
| | | ವಿಷಯವನ್ನು ತರುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೂಚಿಸುವುದು" ಎಂದು ನಿರ್ದೇಶಿಸಿದ್ದ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ಈ ವಿಷಯವನ್ನು ದಿನಾಂಕ:04/07/2024 ರಂದು ಸಚಿವ ಸಂಪುಟದ ಮುಂದೆ ಮಂಡಿಸಿ ಅನುಮೋದನೆ ಪಡೆಯಲಾಗಿರುತ್ತದೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 114 ಬಿಸಿಎ 2022 (ಭಾಗ-6); ದಿನಾಂಕ:06/07/2024 ರನ್ವಯ ನಗರ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಘಟಕಗಳನ್ನು ನಗರಾಭಿವೃದ್ಧಿ ಇಲಾಖೆಯ ನಿಯಂತ್ರಣದಲ್ಲಿ ಉಳಿಸಿ, ಪ್ರಸ್ತುತ ಚಾಲ್ತಿಯಲ್ಲಿರುವ ವ್ಯವಸ್ಥೆಯನ್ನು ಮುಂದುವರೆಸಿ, ಆದೇಶಿಸಲಾಗಿರುತ್ತದೆ.<br><br>2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ- ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿರುತ್ತದೆ. ಈ ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿರುತ್ತದೆ. ಈ ಪ್ರಕರಣವು ದಿನಾಂಕ:16.07.2024 ರಂದು ಮತ್ತೆ ವಿಚಾರಣೆಗೆ ನಿಗಧಿಯಾಗಿದ್ದು, ಇದರಿಂದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪನ್ನು ನಿರೀಕ್ಷಿಸಲಾಗಿದೆ.<br><br>3) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಪೀಠ ಇಲ್ಲಿ ರಿಟ್ ಅರ್ಜಿ ಸಂಖ್ಯೆ: 2448/2024 ನ್ನು ಶ್ರೀ ಸೈಯದ್ ನಸರುಲ್ಲಾ, ಚಿತ್ರದುರ್ಗ ಜಿಲ್ಲೆ ಮತ್ತು ಇತರರು ದಾಖಲಿಸಿದ್ದು, ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಗಳನ್ನು ನಡೆಸಲು ನಿರ್ದೇಶನ ನೀಡುವಂತೆ ಕೋರಿರುತ್ತಾರೆ (ಈ ಪ್ರಕರಣದೊಂದಿಗೆ ರಿಟ್ ಅರ್ಜಿ ಸಂಖ್ಯೆ: 3117/2024 & ರಿಟ್ ಅರ್ಜಿ ಸಂಖ್ಯೆ: 3438/2024ರ ಪ್ರಕರಣಗಳನ್ನು ಲಿಂಕ್ ಮಾಡಲಾಗಿರುತ್ತದೆ). ಈ ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ. ಈ ಪ್ರಕರಣ ಮತ್ತು ಮೇಲೆ ತಿಳಿಸಿರುವ ನ್ಯಾಯಾಲಯ ಪ್ರಕರಣಗಳಲ್ಲಿನ ನಿರ್ದೇಶನದ ಹಿನ್ನೆಲೆಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು, ಉಪಾಧ್ಯಕ್ಷರನ್ನು ಚುನಾವಣೆ ಮೂಲಕ ಆಯ್ಕೆ / ನೇಮಕ ಮಾಡಬೇಕಾಗಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿತ್ತು. |

| | | |
|---|---|---|
| | | ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ: 2448/2024ರ ಪ್ರಕರಣದಲ್ಲಿ ದಿನಾಂಕ:27.05.2024 & 10.06.2024ರಂದು ವಿಚಾರಣೆ ಸಂದರ್ಭದಲ್ಲಿ ನೀಡಿರುವ ದೈನಂದಿನ ಆದೇಶದಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಅಧ್ಯಕ್ಷರು, ಉಪಾಧ್ಯಕ್ಷರ ಸ್ಥಾನಗಳ ಮೀಸಲಾತಿಯನ್ನು ನಿಗಧಿಪಡಿಸುವ ಕುರಿತು ನೀಡಿರುವ ನಿರ್ದೇಶನದಂತೆ ಪ್ರಸ್ತುತ ಕರ್ನಾಟಕ ಪೌರಸಭೆಗಳು (ಅಧ್ಯಕ್ಷರು ಮತ್ತು ಉಪಾಧ್ಯಕ್ಷರ) ಚುನಾವಣೆ (ತಿದ್ದುಪಡಿ) ನಿಯಮಗಳು, 2024ರ ಕರಡು ಅಧಿಸೂಚನೆಯನ್ನು ದಿನಾಂಕ:12.07.2024 ರಂದು ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸಲಹೆ / ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ.<br><br>ಮೇಲಿನ ಕಾರಣಗಳಿಂದ ಮೇಲ್ದರ್ಜೆಗೇರಿಸಲಾದ ಬಜ್ಪೆ, ಕಿನ್ನಿಗೋಳಿ ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆಯನ್ನು ನಡೆಸಲು ಅವಕಾಶವಾಗಿರುವುದಿಲ್ಲ. |
| (ಈ) | ರಾಜ್ಯದಲ್ಲಿ ಎಷ್ಟು ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತ್‌ಗಳನ್ನು ಮಾರ್ಪಾಡು ಮಾಡಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು; (ವಿವರ ನೀಡುವುದು) | ಪಟ್ಟಣ ಪಂಚಾಯಿತಿ, ಪುರಸಭೆ, ಹಾಗೂ ನಗರಸಭೆಗಳನ್ನು ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಸೆಕ್ಷನ್-3 ರಲ್ಲಿರುವ ಮಾನದಂಡಗಳನ್ವಯ ನಿಯಮಾನುಸಾರ ಪರಿಶೀಲಿಸಲಾಗುತ್ತದೆ. ಆದರೆ, ಯಾವುದೇ ತಾಲ್ಲೂಕು, ಮುನಿಸಿಪಾಲಿಟಿ, ಗ್ರಾಮ ಮುಂತಾದವುಗಳ ಸರಹದ್ದುಗಳನ್ನು ಮಾರ್ಪಾಡು ಮಾಡಲು ಅಥವಾ ಹೊಸದಾಗಿ ಮೇಲ್ದರ್ಜೆಗೇರಿಸಲು ಬಾಕಿ ಇರುವ ಅಥವಾ ಮುಂದೆ ಕೈಗೆತ್ತಿಕೊಳ್ಳಬೇಕಾದ ಪ್ರಸ್ತಾವನೆಗಳನ್ನು ದಿನಾಂಕ:30.06.2024ರೊಳಗೆ ಅಂತಿಮಗೊಳಿಸುವಂತೆ ಕಂದಾಯ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 18 ಎಲ್‌ಆರ್‌ಡಿ 2019; ದಿನಾಂಕ:05/02/2024ನ್ನು ಹೊರಡಿಸಿದ್ದು, ದಿನಾಂಕ:30/06/2024ಕ್ಕೆ ಆ ಅವಧಿಯು ಮುಕ್ತಾಯಗೊಂಡಿರುತ್ತದೆ. ಆದ್ದರಿಂದ, ಪ್ರಸ್ತುತ ಪಟ್ಟಣ ಪಂಚಾಯಿತಿ, ಪುರಸಭೆ, ಮತ್ತು ನಗರಸಭೆಗಳನ್ನು ಮೇಲ್ದರ್ಜೆಗೇರಿಸಲು ಕ್ರಮವಹಿಸುತ್ತಿರುವುದಿಲ್ಲ. |
| (ಉ) | ಉಡುಪಿ ಜಿಲ್ಲೆಯ ಕಾಪು ತಾಲ್ಲೂಕಿನ ಶಿರ್ವ ಗ್ರಾಮಪಂಚಾಯತ್ / ಪುರಸಭೆಯನ್ನು ಮೇಲ್ದರ್ಜೆಗೇರಿಸದಿರಲು ಕಾರಣಗಳೇನು? (ವಿವರ ನೀಡುವುದು) | |

**ಸಂಖ್ಯೆ:** ನಅಇ 38 ಎಲ್‌ಸಿಕ್ಯೂ 2024

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು